ಸಂರಕ್ಷಣಾಧಿಕಾರಿಗಳು ಮೃತರ ವಾರಸುದಾರರಿಗೆ ಬಾಕಿ ಮೊತ್ತ ರೂ. 3.00 ಲಕ್ಷಗಳ ದಯಾತ್ಮಕ ಧನವನ್ನು ಪಾವತಿಸಲು ಕ್ರಮ ಕೈಗೊಂಡಿರುತ್ತಾರೆ.

ರಾಮನಗರ ಜಿಲ್ಲೆಯ ಪ್ರಾದೇಶಿಕ ವಿಭಾಗದ ಸೋಲೂರು ಹೋಬಳಿಯ ಮೋಟಗೊಂಡನಹಳ್ಳಿ ಗ್ರಾಮದ ವಾಸಿ ಶ್ರೀ. ಬಿ. ಎನ್. ಸಿದ್ದಲಿಂಗಪ್ಪ ಎಂಬುವರ ವಾರಸುದಾರರಿಗೆ, ನಿಯಮಾನುಸಾರ ರೂ.5.00 ಲಕ್ಷಗಳ ದಯಾತ್ಮಕ ಧನವನ್ನು ಶೀಘ್ರವಾಗಿ ಪಾವತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಕಾಡುಗಳಲ್ಲಿ ಹಣ್ಣಿನ ಗಿಡಗಳನ್ನು ಬೆಳೆಸುವುದು, ನೀರಿಗಾಗಿ ಗಲ್ಲಿಚೆಕ್ಸ್, ಚೆಕ್‌ಡ್ಯಾಮ್‌ಗಳನ್ನು ನಿರ್ಮಾಣ ಮಾಡುವುದು ಮತ್ತು ಹೊಂಡಗಳನ್ನು ತೋಡುವುದು ಇತ್ಯಾದಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

ಕಾಡಿನ ಅಕ್ಕಪಕ್ಕದಲ್ಲಿ ವಾಸಿಸುತ್ತಿರುವ ಜನರಿಗೆ ಕರಡಿಗಳ ದಾಳಿಗಳ ಬಗ್ಗೆ ಮನವರಿಕೆ ಮಾಡಿ ತಮ್ಮ ಹೊಲ, ಗದ್ದೆಗಳ ಕೆಲಸ ಕಾರ್ಯಗಳಿಗೆ ಹೋಗುವಾಗ ಎಚ್ಚರಿಕೆಯಿಂದ ಹೋಗುವುದು ಸಂಜೆ ವೇಳೆಯಲ್ಲಿ ಆದಷ್ಟು ಬೇಗ ತಮ್ಮ ಮನೆಗಳಿಗೆ ತೆರಳುವಂತೆ ತಿಳುವಳಿಕೆ/ಅರಿವು ಮೂಡಿಸಲಾಗುತ್ತಿದೆ.

ಸುವರ್ಣ ಕರ್ನಾಟಕ ಭವನಕ್ಕೆ ಅನುದಾನ ಬಿಡುಗಡೆ

131 : (348)

ಶ್ರೀ ಡಾ ॥ ಶರಣ ಪ್ರಕಾಶ ರುದ್ರಪ್ಪ ಪಾಟೀಲ್ (ಸೇಡಂ)

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಸುವರ್ಣ ಕರ್ನಾಟಕ ಭವನ ಕಟ್ಟಡಕ್ಕೆ ಇನ್ನೂ ಅನುದಾನ ಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಟ್ಟಡ ಅರ್ಧಕ್ಕೆ ನಿಂತಿದ್ದು, ಕಳೆದ ಸಾಲಿನಲ್ಲಿ ರೂ.25.00 ಲಕ್ಷ ಬಿಡುಗಡೆ ಮಾಡಲಾಗುವುದೆಂದು ಭರವಸೆ ನೀಡಿದ್ದು, ಆ ಬಗ್ಗೆ ಕೈಗೊಂಡ ಕ್ರಮಗಳೇನು;

ಆ) ಕಟ್ಟಡ ಪೂರ್ಣಗೋಳಿಸಲು ಸರ್ಕಾರವು ತೆಗೆದುಕೊಳ್ಳುತ್ತಿರುವ ಮುಂದಿನ ಕ್ರಮವೇನು?

ಶ್ರೀ ಗೋವಿಂದ ಎಂ.ಕಾರಜೋಳ
(ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಬಂದಿದೆ.

ಪ್ರಾದೇಶಿಕ ಮಟ್ಟದಲ್ಲಿ ನಾಲ್ಕು ಸುವರ್ಣ ಕರ್ನಾಟಕ ಭವನಗಳನ್ನು ನಿರ್ಮಿಸಲು ತಾತ್ವಿಕ ಅನುಮೋದನೆ ನೀಡಿ ರೂ.5.00 ಕೋಟಿ ಒದಗಿಸಿದ್ದು, ಪ್ರತಿಯೊಂದು ಭವನಕ್ಕೆ ರೂ.1.25 ಕೋಟಿಗಳಂತೆ ಒಟ್ಟು ರೂ.5.00 ಕೋಟಿಗಳನ್ನು ನಿಗದಿಪಡಿಸಿ ಬಿಡುಗಡೆ ಮಾಡಲಾಗಿರುತ್ತದೆ. ಹಾಗೆಯೇ ಸೇಡಂ ಸುವರ್ಣ ಕನ್ನಡ ಭವನ ನಿರ್ಮಾಣವನ್ನು ರೂ.1.25 ಕೋಟಿ ಅನುದಾನದಲ್ಲಿ ಮಾಡಬೇಕೆಂದು ಸರ್ಕಾರ ಷರತ್ತು ವಿಧಿಸಿದೆ.

ಆ) ಹೆಚ್ಚುವರಿ ಅನುದಾನ ಬಿಡುಗಡೆ ಬಗ್ಗೆ ಸರ್ಕಾರದಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

A.I.B.P. ಯ ಯೋಜನೆಯಡಿಯಲ್ಲಿ ಮಂಜೂರಾದ ಅನುದಾನ ಬಳಕೆಯ ಬಗ್ಗೆ
132 : (274)

ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ

ಅ) ಭಾಲ್ಕಿ ತಾಲ್ಲೂಕಿನಲ್ಲಿ AIBP ಕಾರಂಜಿ ಯೋಜನೆಯಡಿಯಲ್ಲಿ ಮಂಜೂರಾದ ಅನುದಾನವನ್ನು ಇದುವರೆವಿಗೂ ಬಳಕೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) AIBP ಯೋಜನೆಯಡಿಯಲ್ಲಿ ಅನುದಾನವನ್ನು ಸದುಪಯೋಗ ಮಾಡಿಕೊಳ್ಳುವಲ್ಲಿ ವಿಫಲವಾಗಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಏನು ಶಿಸ್ತು ಕ್ರಮ ಜರುಗಿಸಿದೆ.

ಇ) ಕಾರಂಜಾ ಯೋಜನೆಯನ್ನು ತ್ವರಿತ ಗತಿಯಲ್ಲಿ ಪೂರ್ಣಗೊಳಿಸಲು ಬೇಕಾಗಿರುವ ಕಾಲ ಎಷ್ಟು; ಇದರ ಬಗ್ಗೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ?